# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 19.03.2022 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71 |
| 2 | ಜಯಂತ್ ಕುಮಾರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ಶ್ರೀ ನಂದೀಶ್ ಕುಮಾರ್ ಎಸ್ ಎಸ್ | ಸಹಾಯಕ ಅಭಿಯಂತರರು, ವಾರ್ಡ್ 71–ಬಿ,ಡಬ್ಲ್ಯು.ಎಸ್.ಎಸ್.ಬಿ |
| 4 | ಸ್ಯಾಮುವೆಲ್ ಎ | ತೋಟಗಾರಿಕೆ ಇಲಾಖಾ ಸಿಬ್ಬಂದಿ |
| 5 | ಶಿವಲಿಂಗೇಗೌಡ | ತೋಟಗಾರಿಕೆ ಇಲಾಖಾ ಸಿಬ್ಬಂದಿ |
| 6 | ಜಿ ರಾಜಣ್ಣ | ಸದಸ್ಯರು |
| 7 | ಸಿ ದೇವರಾಜು | ಸದಸ್ಯರು |
| 8 | ಎನ್ ನಟರಾಜು | ಸದಸ್ಯರು |
| 9 | ವೆಂಕಟರಾಜು | ಸದಸ್ಯರು |
| 10 | ಟಿ ಶೇಖರ್ | ಕಂದಾಯ ಪರಿವೀಕ್ಷಕರು |
| 11 | ಹೆಚ್ ಟಿ ಮುನಿರಾಜು | ಕಂದಾಯ ವಸೂಲಿಗಾರರು |
| 12 | ಅನುಪಮ ಎನ್ | ಕಂದಾಯ ವಸೂಲಿಗಾರರು |
| 13 | ಗಂಗರೆಡ್ಡಿ | ಕಂದಾಯ ಪರಿವೀಕ್ಷಕರು |
| 14 | ಎನ್ ಮುರುಳಿ | ಕಂದಾಯ ವಸೂಲಿಗಾರರು |

:ನಡಾವಳಿಯ ವರದಿ:

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ವಿಷಯ ಸಂಖ್ಯೆ: 1:- ಪೈಪ್ ಲೇನ್ ರಸ್ತೆಯಲ್ಲಿ ಒಳಚರಂಡಿ & ನೀರಿನ ಸಂಪರ್ಕಕ್ಕಾಗಿ ಅಗೆದಿರುವ ರಸೆಯನ್ನು ಸರಿಪಡಿಸುವ ಬಗ್ಗೆ**

ಸದಸ್ಯರಾದ ವೆಂಕಟರಾಜು ರವರು ಪತ್ರವನ್ನು ನೀಡಿ, ಮಾತನಾಡಿ, ಹೆಗ್ಗನಹಳ್ಳಿ ವ್ಯಾಪ್ತಿಯ ಸುಂಕದಕಟ್ಟೆ, ಬಿಬಿಎಂಪಿ ಪಾರ್ಕಿನ ಹತ್ತಿರ, ಪೋಸ್ಟ್ ಆಫೀಸ್ ಬಳಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ಪೈಪ್ ಲೇನ್ ಅಳವಡಿಸಲಾಗಿದ್ದು ಅಗೆದಿದ್ದ ರಸ್ತೆಯನ್ನು ದುರಸ್ತಿಪಡಿಸಿರುವುದಿಲ್ಲ ಇದರಿಂದಾಗಿ ಸಾರ್ವಜನಿಕರ ಸಂಚಾರಕ್ಕೆ ಆಡಚಣೆಯಾಗಿದ್ದು ರಸ್ತೆ ದುರಸ್ಥಿಪಡಿಸುವಂತೆ ಕೋರಿದರು.

ಇದಕ್ಕೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಸಹಾಯಕ ಅಭಿಯಂತರರು ರವರು ಮಾತನಾಡಿ ಪೈಪ್‌ಲೇನ್‌ಗಾಗಿ ಅಗೆದಿದ್ದ ರಸ್ತೆಗಳ Restoration ಕಾರ್ಯವು ಪ್ರಗತಿಯಲ್ಲಿದ್ದು ಶೀಘ್ರದಲ್ಲಿಯೇ ಡಾಂಬರೀಕರಣ ಮಾಡಲಾಗುವುದು ಎಂದು ತಿಳಿಸಿದರು.

- **ವಿಷಯ ಸಂಖ್ಯೆ: 2:- ಟ್ರಾಫಿಕ್ ಪೋಲಿಸ್ ರವರಿಗೆ ಸಂಬಂಧಪಟ್ಟಂತೆ**

ಸದಸ್ಯರಾದ ಶ್ರೀ ವೆಂಕಟರಾಜುರವರು ಮಾತನಾಡಿ, ಸುಂಕದಕಟ್ಟೆಯ ಬಸ್ ನಿಲ್ದಾಣದಲ್ಲಿ ಈ ಬದಿಯಿಂದ ಮತ್ತೊಂದು ಬದಿಗೆ ಜನಸಾಮಾನ್ಯರು ರಸ್ತೆ ದಾಟಲು ಹರಸಾಹಸ ಪಡಬೇಕಾಗಿರುವುದರಿಂದ ಸಿಗ್ನಲ್, ಪೋಲೀಸ್ ಚೌಕಿ, ಅಥವಾ ಸಿಬ್ಬಂದಿ ವರ್ಗವನ್ನು ನೇಮಿಸಿ ಜನಸಾಮಾನ್ಯರ ಪ್ರಾಣ ಹಾನಿಯನ್ನು ತಪ್ಪಿಸಲು ಮನವಿ ಸಲ್ಲಿಸಿದರು.

ಇದಕ್ಕೆ ನೋಡಲ್ ಅಧಿಕಾರಿರವರು ಮಾತನಾಡಿ, ಈ ಬಗ್ಗೆ ಸಂಚಾರಿ ಪೋಲೀಸ್ ಇಲಾಖೆಯೊಂದಿಗೆ ಮಾತನಾಡಿ ಅಗತ್ಯ ಕ್ರಮ ಕೈಗೊಳ್ಳಲು ತಿಳಿಸುವುದಾಗಿ ತಿಳಿಸಿದರು.

- **ವಿಷಯ ಸಂಖ್ಯೆ: 3 :- ಸಾರ್ವಜನಿಕ ಶೌಚಾಲಯದ ಚೇಂಬರ್ ಬ್ಲಾಕ್ ಆಗಿರುವ ಬಗ್ಗೆ**

ಸದಸ್ಯರಾದ ಶ್ರೀ ನಟರಾಜು ರವರು ಮಾತನಾಡಿ, ಬಿಬಿಎಂಪಿ ಸುಂಕದಕಟ್ಟೆ ಹತ್ತಿರ ನಿರ್ಮಿಸಿರುವ ಶೌಚಾಲಯ ತುಂಬಾ ಹದಗೆಟ್ಟಿದ್ದು ಛೇಂಬರ್ ಸಹ ಬ್ಲಾಕ್ ಆಗಿರುತ್ತದೆ. ಆದ್ದರಿಂದ ಅದನ್ನು ಶುಚಿಯಾಗಿಡಲು ಕೋರಿದರು.

ಈ ಬಗ್ಗೆ ನೋಡಲ್ ಅಧಿಕಾರಿರವರು ಸಂಬಂಧಪಟ್ಟ ಗುತ್ತಿಗೆದಾರರಿಗೆ ಕರೆ ಮಾಡಿ ಮಾತನಾಡಿ ಶೌಚಾಲಯವನ್ನು ಶುಚಿಯಾಗಿಟ್ಟುಕೊಳ್ಳುವ ಬಗ್ಗೆ ಅಗತ್ಯ ಕ್ರಮ ವಹಿಸುವಂತೆ ಸೂಚಿಸಿದರು,

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಜಯಂತ್ ಕುಮಾರ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ 71, ಹೆಗ್ಗನಹಳ್ಳಿ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ.71, ಹೆಗ್ಗನಹಳ್ಳಿ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಪ್ರತಿಯನ್ನು:**

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ